ಪ್ರಸ್ತುತ ಜಾರಿಯಲ್ಲಿರುವ ಮೀಸಲಾತಿ ನಿಯಮಗಳನ್ನು ಅನುಸರಿಸಿ ಶಿಕ್ಷಕರ ಆಯ್ಕೆ ಮಾಡಲಾಗಿದೆ.

ವಿಷಯ: ದ.ಕ. ಹಾಗೂ ಉಡುಪಿ ಜಿಲ್ಲೆಗಳಲ್ಲಿ ವಿಶ್ವಬ್ಯಾಂಕ್ ನೆರವಿನಿಂದ ತೆಗೆದುಕೊಂಡಿರುವ ಕುಡಿಯುವ ನೀರಿನ ಯೋಜನೆಗಳು.

10 14 (1350)

ಶ್ರೀ ವಸಂತ ವಿ.ಸಾಲಿಯಾನ (ಕಾಪು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮಂಜೂರಾಗಿರುವ ವಿಶ್ವಬ್ಯಾಂಕ್ ನೆರವಿನ ಕುಡಿಯುವ ನಲ್ಲಿ ನೀರಿನ ಯೋಜನೆಗಳೆಷ್ಟು, ಅವುಗಳಲ್ಲಿ ಕಾಪು ಮತಕ್ಷೇತ್ರದಲ್ಲಿ ಮಂಜೂರಾದ ಯೋಜನೆಗಳು ಯಾವುವು?

ಆ) ಈ ಕಾಮಗಾರಿಗಳು ಈಗ ಯಾವ ಹಂತದಲ್ಲಿದೆ ಹಾಗೂ ಇವುಗಳನ್ನು ಯಾವಾಗ ಸಂಪೂರ್ಣಗೊಳಿಸಲಾಗುವುದು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) 1. ದಕ್ಷಿಣ ಕನ್ನಡ - 62 ಗ್ರಾಮಗಳು

2. ಉಡುಪಿ ಜಿಲ್ಲೆ - 28 ಗ್ರಾಮಗಳು

ಒಟ್ಟು - 90 ಗ್ರಾಮಗಳು

ಕಾಪು ಮತಕ್ಷೇತ್ರದ ಗ್ರಾಮಗಳು - 2
(ಮಾಲೂರು ಮತ್ತು ಶಿರ್ವ)

ಆ) ಯೋಜನೆಯನ್ನು ಮೂರು ಹಂತಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

ಉಡುಪಿ ಜಿಲ್ಲೆಯ ಪ್ರಾಯೋಗಿಕ ಗ್ರಾಮವಾದ ಹೊಂಬಾಡಿ ಮುಂಡಾಡಿ ಎಲ್ಲ ಕಾಮಗಾರಿಗಳು ಮುಕ್ತಾಯವಾಗಿವೆ.

ಪ್ರಥಮ ಹಂತದಲ್ಲಿ ಒಳಗೊಂಡಿರುವ ದಕ್ಷಿಣ ಕನ್ನಡ ಜಿಲ್ಲೆಯ 11 ಗ್ರಾಮಗಳು ಹಾಗೂ ಉಡುಪಿ ಜಿಲ್ಲೆಯ 8 ಗ್ರಾಮಗಳ ಪೈಕಿ ಒಂದು ಗ್ರಾಮದ ಕಾಮಗಾರಿಗಳು ಮುಕ್ತಾಯವಾಗಿದ್ದು ನೀರು ಸರಬರಾಜು ಯೋಜನೆಯು ಕಾರ್ಯಾರಂಭ ಮಾಡಿದೆ.

ಉಳಿದ ಗ್ರಾಮಗಳ ಕಾಮಗಾರಿಗಳು ಬಹುತೇಕ ಮುಕ್ತಾಯವಾಗಿದ್ದು ಎಂಡ್ ಕನೆಕ್ಷನ್ ವಿದ್ಯುತ್ ಸಂಪರ್ಕ ಕೆಲಸಗಳು ಮಾತ್ರ ಬಾಕಿ ಇದ್ದು ಜುಲೈ 98ರೊಳಗೆ ನೀರು ಸರಬರಾಜು ವ್ಯವಸ್ಥೆ ಕಾರ್ಯಾರಂಭ ಮಾಡುವ ನಿರೀಕ್ಷೆ ಇದೆ.

ಎರಡನೇ ಹಂತದಲ್ಲಿ ಒಳಗೊಂಡಿರುವ ದಕ್ಷಿಣ ಕನ್ನಡ ಜಿಲ್ಲೆಯ 51 ಮತ್ತು ಉಡುಪಿ ಜಿಲ್ಲೆಯ 19 ಗ್ರಾಮಗಳ (ಒಟ್ಟು 70) ಪೈಕಿ ಈಗಾಗಲೇ ದಕ್ಷಿಣ ಕನ್ನಡ ಜಿಲ್ಲೆಯ 42 ಮತ್ತು ಉಡುಪಿ ಜಿಲ್ಲೆಯ 12 (ಒಟ್ಟು 54) ಗ್ರಾಮಗಳ ನೀರು ಸರಬರಾಜು ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದ್ದು ಈಗಾಗಲೇ 12 ಟೆಂಡರ್‌ಗಳನ್ನು ಅನುಮೋದಿಸಲಾಗಿದ್ದು 6 ಗ್ರಾಮಗಳಲ್ಲಿ ಕಾಮಗಾರಿಗಳು ಪ್ರಗತಿಯಲ್ಲಿವೆ.

ಯೋಜನೆಯ ಮುಕ್ತಾಯದ ಅವಧಿಯಾದ ದಿನಾಂಕ 31- 12- 1999ರೊಳಗೆ ಎಲ್ಲ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ವಿಷಯ: ರಾಜ್ಯದಲ್ಲಿ ಸ್ವಂತ ಸಂಪನ್ಮೂಲವಿಲ್ಲದ ಪಂಚಾಯತ್‌ಗಳಿಗೆ ಹೆಚ್ಚುವರಿ ಅನುದಾನ

1016 (1367)

ಶ್ರೀ ವಸಂತ ವಿ. ಸಾಲಿಯಾನ (ಕಾಪು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸ್ವಂತ ಸಂಪನ್ಮೂಲವಿಲ್ಲದ ಪಂಚಾಯತಿಗಳ ಸಂಖ್ಯೆ ಎಷ್ಟು?

ಆ) ಇಂತಹ ಪಂಚಾಯತಿಗಳ ಅಭಿವೃದ್ಧಿ ಬಗ್ಗೆ ಸರ್ಕಾರದವರು ಹೆಚ್ಚುವರಿ ನೀಡಿದ ಅನುದಾನವೆಷ್ಟು? (ಜಿಲ್ಲಾವಾರು ವಿವರ ನೀಡುವುದು)

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಯಾವುದೂ ಇಲ್ಲ.

ಆ) ಸರ್ಕಾರ ನೀಡಿರುವ ಅನುದಾನಗಳ ವಿವರಗಳನ್ನು ಲಗತ್ತಿಸಿದೆ.